# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2023-24ನೇ ಆರ್ಥಿಕ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ-102ರಲ್ಲಿನ ಘೋಷಣೆಯಂತೆ ಅತ್ಯುತ್ತಮ ಸಾಧನೆ ಮಾಡುವ ವಿಶ್ವವಿದ್ಯಾಲಯಗಳಿಗೆ ಪ್ರೋತ್ಸಾಹ ಧನ ಮಂಜೂರು ಮಾಡುವ ಬಗ್ಗೆ.

*****

ಓದಲಾಗಿದೆ:-

1. 2023-24ನೇ ಆರ್ಥಿಕ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ-102ರಲ್ಲಿನ ಘೋಷಣೆ.
2. ಆರ್ಥಿಕ ಇಲಾಖೆ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 204 ವೆಚ್ಚ-8/2023, ದಿನಾಂಕ: 05.08.2023ರ Budget Advice,
3. ಸರ್ಕಾರದ ಆದೇಶ ಸಂಖ್ಯೆ: ಇಡಿ 86 ಹೆಚ್‌ಪಿಯು 2023, ದಿನಾಂಕ: 28.12.2023.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 86 ಹೆಚ್‌ಪಿಯು 2023, ದಿನಾಂಕ: 25.01.2024 ಮತ್ತು ದಿನಾಂಕ: 22.02.2024.
5. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಇವರ ಪ್ರಸ್ತಾವನೆ ಸಂಖ್ಯೆ: ಕಾರಾಉಶಿಪ/ವಿಸಿಪಿ/2/2024, ದಿನಾಂಕ: 29.02.2024.

**ಪ್ರಸ್ತಾವನೆ:-**

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ 2023-24ನೇ ಆರ್ಥಿಕ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-102ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ:-

"ಸಾರ್ವಜನಿಕ ವಿಶ್ವವಿದ್ಯಾಲಯಗಳ ಆಡಳಿತ ವ್ಯವಸ್ಥೆಯನ್ನು ಉತ್ತಮಪಡಿಸಲು 10 ಸುಶಾಸನ ಸೂಚ್ಯಂಕಗಳನ್ನು (Good Governance Indicators) ರಚಿಸಲಾಗಿದ್ದು, ಇದರನ್ವಯ ಅತ್ಯುತ್ತಮ ಸಾಧನೆ ಮಾಡುವ ವಿಶ್ವವಿದ್ಯಾಲಯಗಳಿಗೆ ತಲಾ 50ಲಕ್ಷ ರೂ.ಗಳಂತೆ ಪ್ರೋತ್ಸಾಹ ಧನ ನೀಡಲಾಗುವುದು"

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಆರ್ಥಿಕ ಇಲಾಖೆ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 204 ವೆಚ್ಚ-8/2023, ದಿನಾಂಕ: 05.08.2023ರ Budget Advice ನ ಅನುಬಂಧ-2ರಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದೆ.

"ರಾಜ್ಯದಲ್ಲಿ ನೂತವಾಗಿ ಸ್ಥಾಪನೆಯಾಗಿರುವ ವಿಶ್ವವಿದ್ಯಾಲಯಗಳ ಸಿಬ್ಬಂದಿಗಳ ವೇತನವನ್ನು ಪಾವತಿಸಲು ಲೆಕ್ಕ ಶೀರ್ಷಿಕೆ: 2202-03-102-0-52-ವಿಶ್ವವಿದ್ಯಾಲಯಗಳ ಅಭಿವೃದ್ಧಿಗಾಗಿ ಅನುದಾನ-103-ಸಹಾಯಾನುದಾನ ಸಾಮಾನ್ಯ ಈ ಲೆಕ್ಕ ಶೀರ್ಷಿಕೆಯನ್ನು ಸೃಜಿಸಲಾಗಿದೆ. ಈ ಲೆಕ್ಕ ಶೀಕರ್ಷಿಕೆಯಡಿ ಒದಗಿಸಲಾಗಿರುವ ರೂ.3350.00ಲಕ್ಷಗಳನ್ನು 2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-98ರಲ್ಲಿ ಘೋಷಣೆಯಾಗಿರುವ ಯೋಜನೆಯನ್ನು ಅನುಷ್ಠಾನಗೊಳಿಸಲು ನಿಗಧಿಪಡಿಸಲಾಗಿದೆ. ಬಾಕಿ ಉಳಿದ ರೂ.850.00ಲಕ್ಷಗಳನ್ನು 2023-24ನೇ ಸಾಲಿನ ಭಾಷಣದ ಕಂಡಿಕೆ-102ರಲ್ಲಿ ಘೋಷಣೆಯಾಗಿರುವ ಯೋಜನೆಗಾಗಿ ಮತ್ತು ವಿಶ್ವವಿದ್ಯಾಲಯಗಳ ಅಭಿವೃದ್ಧಿ ಕಾರ್ಯಗಳಿಗಾಗಿ ನಿಗಧಿಪಡಿಸಲಾಗಿದೆ"

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಆದೇಶದಲ್ಲಿ 2023-24ನೇ ಆರ್ಥಿಕ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-102ರಲ್ಲಿ ಘೋಷಿಸಿರುವಂತೆ "ಸಾರ್ವಜನಿಕ ವಿಶ್ವವಿದ್ಯಾಲಯಗಳ ಆಡಳಿತ ವ್ಯವಸ್ಥೆಯನ್ನು ಉತ್ತಮಪಡಿಸಲು ಸುಶಾಸನ ಸೂಚ್ಯಂಕಗಳನ್ನು/ಮಾರ್ಗಸೂಚಿಗಳನ್ನು (Good Governance Indicators) ರಚಿಸಲಾಗಿದ್ದು, ಇದರನ್ವಯ ಅತ್ಯುತ್ತಮ ಸಾಧನೆ ಮಾಡುವ ವಿಶ್ವವಿದ್ಯಾಲಯಗಳಿಗೆ ಲೆಕ್ಕ ಶೀರ್ಷಿಕೆ: 2202-03-102-0-52-ವಿಶ್ವವಿದ್ಯಾಲಯಗಳ ಅಭಿವೃದ್ಧಿಗಾಗಿ ಅನುದಾನ-103-ಸಹಾಯಾನುದಾನ ಸಾಮಾನ್ಯ ರಡಿ ಒದಗಿಸಿರುವ ರೂ.350.00ಲಕ್ಷಗಳಲ್ಲಿ ತಲಾ ರೂ.50.00ಲಕ್ಷಗಳಂತೆ ಪ್ರೋತ್ಸಾಹ ಧನ ನೀಡಲು ಅಗತ್ಯ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಆದೇಶಗಳಲ್ಲಿ 2023-24ನೇ ಆರ್ಥಿಕ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ-102ರಲ್ಲಿನ ಘೋಷಣೆಯಂತೆ ಅತ್ಯುತ್ತಮ ಸಾಧನೆ ಮಾಡುವ ವಿಶ್ವವಿದ್ಯಾಲಯಗಳಿಗೆ ಪ್ರೋತ್ಸಾಹ ಧನ ನೀಡಲು ಉಪಾಧ್ಯಕ್ಷರು, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಪ್ರಶಸ್ತಿಗಾಗಿ ವಿಶ್ವವಿದ್ಯಾಲಯಗಳ ಉತ್ತಮ ಆಡಳಿತವನ್ನು ಮೌಲ್ಯಮಾಪನ ಮಾಡಲು ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (5)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಇವರು ವಿಶ್ವವಿದ್ಯಾಲಯಗಳ ಉತ್ತಮ ಆಡಳಿತವನ್ನು ಮೌಲ್ಯಮಾಪನ ಮಾಡಲು ರಚಿಸಿರುವ ಸಮಿತಿಯು ದಿನಾಂಕ: 29.02.2024ರಂದು ಸಭೆ ನಡೆಸಿ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ರಾಜ್ಯದ ವಿಶ್ವವಿದ್ಯಾಲಯಗಳು ಸರ್ಕಾರದ ಆದೇಶದಲ್ಲಿ ಪಟ್ಟಿ ಮಾಡಿರುವ ಉತ್ತಮ ಆಡಳಿತ ಸುಶಾಸನಗಳಿಗೆ ಸಂಬಂಧಿಸಿದಂತೆ ಮಾಡಿರುವ ಉತ್ತಮ ಸಾಧನೆಗಳ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ಪ್ರಸ್ತುತ ಪಡಿಸಿದ ಪ್ರಸ್ತಾವನೆಗಳನ್ನು ಮೌಲ್ಯಮಾಪನ ಮಾಡಿ 07 ವಿಶ್ವವಿದ್ಯಾಲಯಗಳನ್ನು ಆಯ್ಕೆ ಮಾಡಿ ಶಿಫಾರಸ್ಸು ಮಾಡಲಾಗಿದೆ. ಶಿಫಾರಸ್ಸುಗಳನ್ನೊಳಗೊಂಡ ಸಮಿತಿ ಸಭೆಯ ನಡವಳಿಗಳನ್ನು ಮುಂದಿನ ಕ್ರಮಕ್ಕಾಗಿ ಸಲ್ಲಿಸಿರುತ್ತಾರೆ. ವಿಶ್ವವಿದ್ಯಾಲಯಗಳು ಗಳಿಸಿದ ಅಂಕಗಳ ಆಧಾರದ ಮೇಲೆ ಸರ್ಕಾರದ ಪ್ರೋತ್ಸಾಹ ಧನ ನೀಡಲು ಸಮಿತಿಯು ಕೆಳಕಂಡಂತೆ ವಿಶ್ವವಿದ್ಯಾಲಯಗಳನ್ನು ಆಯ್ಕೆ ಮಾಡಿ ಶಿಫಾರಸ್ಸು ಮಾಡಿರುತ್ತದೆ.

| ಕ್ರ. ಸಂ | ವಿಶ್ವವಿದ್ಯಾಲಯ | ಸುಶಾಸನ ವಿಭಾಗ | ಗಳಿಸಿದ ಅಂಕಗಳು |
|---|---|---|---|
| 1. | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | Best University in Examination practices. | 85 |
| 2. | ಮೈಸೂರು ವಿಶ್ವವಿದ್ಯಾಲಯ | University provided highest employability/best placement services including affiliate college. | 80 |
| 3. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | University for best mentorship with affiliated colleges | 76 |
| 4. | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು. | Best University in E-governance practices | 73 |
| 5. | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ. | Best University in Stakeholder conversations. | 71 |
| 6. | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | Best university in faculty development programme. | 70 |

| | | | |
|---|---|---|---|
| 7. | ರಾಣಿಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | Best MoUs with industry for intership and apprenticeship embedded programmes and curriculum revision and curriculum revision for employability. | 68 |

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 86 ಹೆಚ್‌ಪಿಯು 2023, ಬೆಂಗಳೂರು, ದಿನಾಂಕ: 05ನೇ ಮಾರ್ಚ್, 2024.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಆರ್ಥಿಕ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ-102ರಲ್ಲಿನ ಘೋಷಣೆಯಂತೆ ಅತ್ಯುತ್ತಮ ಸಾಧನೆ ಮಾಡುವ ವಿಶ್ವವಿದ್ಯಾಲಯಗಳಿಗೆ ಪ್ರೋತ್ಸಾಹ ಧನ ನೀಡಲು ಉಪಾಧ್ಯಕ್ಷರು, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಪ್ರಶಸ್ತಿಗಾಗಿ ವಿಶ್ವವಿದ್ಯಾಲಯಗಳ ಉತ್ತಮ ಆಡಳಿತವನ್ನು ಮೌಲ್ಯಮಾಪನ ಮಾಡಲು ರಚಿಸಲಾಗಿದ್ದ ಸಮಿತಿಯು ಶಿಫಾರಸ್ಸು ಮಾಡಿರುವ ಈ ಕೆಳಕಂಡ ವಿಶ್ವವಿದ್ಯಾಲಯಗಳಿಗೆ ಲೆಕ್ಕ ಶೀರ್ಷಿಕೆ: 2202-03-102-0-52-ವಿಶ್ವವಿದ್ಯಾಲಯಗಳ ಅಭಿವೃದ್ಧಿಗಾಗಿ ಅನುದಾನ-103-ಸಹಾಯಾನುದಾನ ಸಾಮಾನ್ಯ ರಡಿ ಒದಗಿಸಿರುವ ರೂ.350.00ಲಕ್ಷಗಳಲ್ಲಿ ತಲಾ ರೂ.50.00ಲಕ್ಷಗಳಂತೆ ಪ್ರೋತ್ಸಾಹ ಧನ ಮಂಜೂರು ಮಾಡಿ ಆದೇಶಿಸಿದೆ.

| ಕ್ರ. ಸಂ | ವಿಶ್ವವಿದ್ಯಾಲಯ | ಸುಶಾಸನ ವಿಭಾಗ | ಗಳಿಸಿದ ಅಂಕಗಳು |
|---|---|---|---|
| 1. | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | Best University in Examination practices. | 85 |
| 2. | ಮೈಸೂರು ವಿಶ್ವವಿದ್ಯಾಲಯ | University provided highest employability/best placement services including affiliate college. | 80 |
| 3. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | University for best mentorship with affiliated colleges | 76 |
| 4. | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು. | Best University in E-governance practices | 73 |
| 5. | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ. | Best University in Stakeholder conversations. | 71 |
| 6. | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | Best university in faculty development programme. | 70 |
| 7. | ರಾಣಿಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | Best MoUs with industry for intership and apprenticeship embedded programmes and curriculum revision and curriculum revision for employability. | 68 |

ಷರತ್ತುಗಳು:-

1. ವಿಶ್ವವಿದ್ಯಾಲಯಗಳಿಗೆ ನೀಡುವ ಈ ಪ್ರೋತ್ಸಾಹ ಧನವನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಮಾತ್ರ ಬಳಕೆ ಮಾಡಿಕೊಳ್ಳತಕ್ಕದ್ದು;
2. ಪ್ರೋತ್ಸಾಹ ಧನದಿಂದ ಕೈಗೊಂಡ ಕಾರ್ಯಕ್ರಮಗಳ ವಿವರ/ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

3. ತತ್ಸಂಬಂಧಿತ ಜಿ.ಐ.ಎ. ಬಿಲ್ಲನ್ನು ಸಂಬಂಧಿತ ಕಾಲೇಜು ಶಿಕ್ಷಣ ಇಲಾಖೆಯ ಆಯಾ/ಸಂಬಂಧಿತ ಜಂಟಿ ನಿರ್ದೇಶಕರುಗಳ ಮೂಲಕ ಸಲ್ಲಿಸುವ ಬಿಲ್ಲುಗಳಿಗೆ ಮೇಲು ರುಜು ಮಾಡಲು ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಯೋಜನೆ ಮತ್ತು ತಾಂತ್ರಿಕ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರನ್ನು ಅಧಿಕೃತಗೊಳಿಸಲಾಗಿದೆ. ಸದರಿ ಸಹಾಯಾನುದಾನದ ಬಿಲ್ಲುಗಳನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಎಫ್‌ಆರ್‌ಸಿ 2003, ದಿನಾಂಕ: 27.12.2004ರ ಸರ್ಕಾರಿ ಆದೇಶದಲ್ಲಿನ ಸೂಚನೆಗಳನ್ವಯ ಅನುದಾನದ ಬಿಲ್ಲುಗಳಿಗೆ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನಾಧಿಕಾರಿಗಳಿಗೆ/ಜಿಲ್ಲಾ ಖಜಾನಾಧಿಕಾರಿಗಳಿಗೆ ಕಳುಹಿಸಿ ಚೆಕ್‌ನ್ನು ಪಡೆದು ಸಂಬಂಧಿತ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿಗಳಿಗೆ ಕಳುಹಿಸತಕ್ಕದ್ದು;
4. ವಿಶ್ವವಿದ್ಯಾಲಯಕ್ಕೆ 2023-24ನೇ ಸಾಲಿಗೆ ಬಿಡುಗಡೆ ಮಾಡಲಾದ ಅನುದಾನದ ಮೊತ್ತದ ಓಚರ್ ಸಂಖ್ಯೆ ಇತ್ಯಾದಿ ವಿವರಗಳನ್ನು ಸಂಬಂಧಪಟ್ಟ ಖಜಾನೆ ಇಲಾಖೆಯಿಂದ ಪಡೆದು ಮಹಾಲೇಖಪಾಲರ ಕಛೇರಿಯ ಅಂಕಿಗಳೊಂದಿಗೆ ಮರು ಹೊಂದಾಣಿಕೆ (Reconciliation) ಮಾಡಿ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಮರು ಹೊಂದಾಣಿಕೆಗೆ ಸಂಬಂಧಿಸಿದ ಯಾವುದೇ ಲೋಪದೋಷಗಳಿದ್ದಲ್ಲಿ ಮಹಾಲೇಖಪಾಲರ ಕಛೇರಿಯನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳತಕ್ಕದ್ದು.
5. ಕರ್ನಾಟಕ ಬಜೆಟ್ ಕೈಪಿಡಿ ಪ್ಯಾರಾ-251 ಹಾಗೂ ಕರ್ನಾಟಕ ಆರ್ಥಿಕ ಸಂಹಿತೆ ಆರ್ಟಿಕಲ್-346 ರನ್ವಯ ಇಲಾಖೆ ಜಮೆ ಮತ್ತು ವೆಚ್ಚಗಳ ಲೆಕ್ಕಹೊಂದಾಣಿಕೆಯನ್ನು ಪ್ರತಿ ತಿಂಗಳು ಮಾಡತಕ್ಕದ್ದು. ಇದು ಆದ್ಯ ಕರ್ತವ್ಯವಾಗಿರುತ್ತದೆ. ಆದಾಗ್ಯೂ ಸಲ್ಲಿಸದೇ ಇರುವುದು ಕಂಡು ಬಂದ ಹಿನ್ನಲೆಯಲ್ಲಿ, ಮಹಾಲೇಖಪಾಲರ ನಿರ್ದೇಶನದಂತೆ, ಲೆಕ್ಕಹೊಂದಾಣಿಕೆ ಪಟ್ಟಿಯನ್ನು ದೃಢೀಕರಿಸಿ ಸಲ್ಲಿಸಿದ ಕೂಡಲೇ ಅನುದಾನ ಬಿಡುಗಡೆ ಮಾಡುವುದು.
6. ಪ್ರತಿ ವೆಚ್ಚಕ್ಕೂ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಅನುಮೋದನೆಯನ್ನು ಪೂರ್ವಾನ್ವಯವಾಗಿ ಪಡೆದುಕೊಂಡಿರತಕ್ಕದ್ದು. ಅನುದಾನವು ಯಾವ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಲಾಗುತ್ತಿದೆಯೋ ಅದೆ ಉದ್ದೇಶಕ್ಕಾಗಿ ಬಳಸುವುದು. KTPP Act ಮತ್ತು Rules ಅನ್ನು ಕಡ್ಡಾಯವಾಗಿ ಪಾಲಿಸತಕ್ಕದು.
7. ಯಾವುದೇ ರೀತಿಯಲ್ಲಿ ಅನುದಾನದ ಬಳಕೆಯಲ್ಲಿ ಪುನರಾವರ್ತನೆ ಆಗಬಾರದು. ಅನುದಾನದ ಬಿಡುಗಡೆ ಹಾಗು ಬಳಕೆಯ ವಿವರಗಳನ್ನು ಸಂಬಂಧಿತ ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣದಲ್ಲಿ (official website)ರಲ್ಲಿ ಪ್ರಚುರಪಡಿಸುವುದು.
8. ಅನುದಾನ ಬಳಕೆ ಮಾಡಲು ಸಾಧ್ಯವಾಗದಿದ್ದಲ್ಲಿ ಸರ್ಕಾರಕ್ಕೆ ಅಧ್ಯರ್ಪಣೆ ಮಾಡತಕ್ಕದ್ದು.
9. ಇದುವರೆಗೆ ಬಿಡುಗಡೆ ಮಾಡಿರುವ ಅನುದಾನದ ಬಳಕೆಗೆ ನಿಗಧಿತ ನಮೂನೆಯಲ್ಲಿ ಬಳಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು;

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಎನ್. ಕುಮಾರ್
(ಎನ್.ಕುಮಾರ್) 05/3/2024
ಸರ್ಕಾರದ ಉಪ ಕಾರ್ಯದರ್ಶಿ,
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)
ಉನ್ನತ ಶಿಕ್ಷಣ ಇಲಾಖೆ.

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ [ಎ&ಇ], ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಕುಲಪತಿಗಳು/ ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ, ಮಂಗಳೂರು ವಿಶ್ವವಿದ್ಯಾನಿಲಯ, ಮಂಳಗಂಗೋತ್ರಿ, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.

4. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಶಿಕ್ಷಣ ಪರಿಷತ್.
6. ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಜಂಟಿ ನಿರ್ದೇಶಕರುಗಳಿಗೆ.
7. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿಗಳು.
9. ಸರ್ಕಾರದ ಉಪ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು), ಬಹು ಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಸಮನ್ವಯಾಧಿಕಾರಿ, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ. (ಅಂತರ್ಜಾಲದಲ್ಲಿ ಪ್ರಕಟಿಸಲು)
12. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿಗಳು.